## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ನಿಗಮಗಳಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಘಟಕ ವೆಚ್ಚವನ್ನು ರೂ. 1.00 ಲಕ್ಷಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ.**

1. ಸರ್ಕಾರ ಆದೇಶ ಸಂಖ್ಯೆ: ಸಕಇ 195 ಎಸ್‌ಡಿಸಿ 2020, ಬೆಂಗಳೂರು, ದಿನಾಂಕ: 10-09-2020.
2. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಇವರ ಏಕ ಕಡತ ಸಂಖ್ಯೆ: BJLIDC/DEVP/DL/1/2022-MD, ದಿನಾಂಕ:31.05.2022.

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ: 10-09-2020 ರ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಘಟಕ ವೆಚ್ಚ ಗರಿಷ್ಟ ರೂ.50,000/- ಗಳಂತೆ ನಿಗದಿ ಪಡಿಸಿ ರೂ.25,000/- ಸಾಲ ಮತ್ತು ರೂ.25,000/- ಸಹಾಯಧನವನ್ನು ಮಂಜೂರು ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ದಿನಾಂಕ: 31.05.2022 ರ ಏಕ ಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಇವರು ಸದರಿ ನೇರ ಸಾಲ ಯೋಜನೆಯ ಘಟಕ ವೆಚ್ಚವನ್ನು ರೂ. 50,000/- ಗಳಿಂದ ರೂ. 1.00 ಲಕ್ಷಗಳಿಗೆ ಹೆಚ್ಚಿಸಲು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಿಗಮಗಳಿಗೆ ಅನ್ವಯಿಸುವಂತೆ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳು.

1. ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಅಲೆಮಾರಿ/ಅರೆಅಲೆಮಾರಿ ಕೋಶ
2. ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ,
3. ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,
4. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ,
5. ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ,
6. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಮತ್ತು
7. ಪರಿಶಿಷ್ಟ ಪಂಗಡಗಳ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳು

2022-23 ನೇ ಸಾಲಿನಿಂದ ಪ.ಜಾತಿ/ಪ.ಪಂಗಡದ ಮೇಲ್ಕಂಡ ನಿಗಮಗಳಲ್ಲಿ ಬರುವ ಸಮುದಾಯಗಳಿಗೆ ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು

ದಿನಾಂಕ: 20.05.2022 ರಂದು ನಡೆದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ನಡೆದ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯ ನಡವಳಿಗಳಂತೆ ನೇರಸಾಲ ಯೋಜನೆಯಡಿ ಜಾರಿಯಲ್ಲಿರುವ ರೂ.50,000/- ಘಟಕ ವೆಚ್ಚವನ್ನು ರೂ.1.00 ಲಕ್ಷಕ್ಕೆ ಹೆಚ್ಚಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 481 ಎಸ್‌ಡಿಸಿ 2022, ಬೆಂಗಳೂರು, ದಿನಾಂಕ:07 ಜೂನ್ 2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ಈ ಕೆಳಕಂಡ ಅಭಿವೃದ್ಧಿ ನಿಗಮಗಳಿಂದ ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಯೋಜನೆಯಡಿ ಆದಾಯ ಬರುವ ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೆತ್ತಿಕೊಳ್ಳಲು ನೇರ ಸಾಲ ಯೋಜನೆಯಡಿ ಘಟಕ ವೆಚ್ಚವನ್ನು ರೂ.50,000/- ದಿಂದ ರೂ.1.00 ಲಕ್ಷಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಹೆಚ್ಚಿಸಲಾಗಿದೆ. ಅದರ ಪೈಕಿ ರೂ.50,000/- ಸಹಾಯಧನ, ರೂ.50,000/- ಸಾಲ.

1. ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಅಲೆಮಾರಿ/ಅರೆಅಲೆಮಾರಿ ಕೋಶ
2. ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ,
3. ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,
4. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ,
5. ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ,
6. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಮತ್ತು
7. ಪರಿಶಿಷ್ಟ ಪಂಗಡಗಳ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳು

ಷರತ್ತುಗಳು:-

1. ಆರ್ಥಿಕ ಚಟುವಟಿಕೆಗಳ ಆಧಾರದ ಮೇಲೆ ಯೋಜನಾ ಘಟಕ ವೆಚ್ಚದಲ್ಲಿ ಗರಿಷ್ಟ ರೂ.50,000/- ಸಹಾಯಧನ, ರೂ.50,000/- ಸಾಲವನ್ನು ನೀಡುವುದು. (ಗರಿಷ್ಟ 50% ಸಹಾಯಧನ ಮತ್ತು 50% ಸಾಲ)
2. 2022-23 ನೇ ಸಾಲಿನ ಆಯವ್ಯಯದಲ್ಲಿ ನಿಗಮಗಳಿಗೆ ಹಂಚಿಕೆಯಾಗಿರುವ ಅನುದಾನವನ್ನು ಜನಸಂಖ್ಯೆ ಆಧಾರದ ಮೇಲೆ ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ಭೌತಿಕ ಗುರಿಗಳನ್ನು ನಿಗದಿಪಡಿಸಿಕೊಂಡು ನಿಯಮಾನುಸಾರ ಯೋಜನೆಯನ್ನು ಅನುಷ್ಠಾನಗೊಳಿಸುವುದು.
3. ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯನ್ನು ಸುವಿಧಾ ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಮಂಜೂರಾದ ನಂತರ ಡಿ.ಬಿ.ಟಿ ಮೂಲಕ ಸಾಲ ಮತ್ತು ಸಹಾಯಧನವನ್ನು ಫಲಾನುಭವಿಗಳಿಗೆ ನೀಡುವುದು.
4. ಸದರಿ ಸಹಾಯಧನ ಮತ್ತು ಸಾಲವನ್ನು 2 ಕಂತುಗಳಲ್ಲಿ ಬಿಡುಗಡೆಗೊಳಿಸಿ ಸದರಿ ಮೊತ್ತವನ್ನು ಪ್ರಸ್ತಾಪಿಸಿರುವ ಆರ್ಥಿಕ ಚಟುವಟಿಕೆಗಳಿಗೆ ಉಪಯೋಗಿಸಲಾಗುತ್ತಿರುವ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಖಚಿತಪಡಿಸಿಕೊಳ್ಳತಕ್ಕದ್ದು.
5. ಸದರಿ ಸಾಲ ಮತ್ತು ಸಹಾಯಧನವನ್ನು ಯಾವ ಉದ್ದೇಶಕ್ಕೆ ನೀಡಲಾಗಿದೆ, ಅದೇ ಉದ್ದೇಶಕ್ಕೆ ವೆಚ್ಚ ಮಾಡುವುದು ಮತ್ತು ಅದರಿಂದ ಭೌತಿಕ ಆಸ್ತಿ ಸೃಜಿಸಲಾಗಿದೆಯೇ ಎಂಬ ಬಗ್ಗೆ ಪರಿಶೀಲಿಸುವುದು.

....3

ನಿಗದಿತ ಉದ್ದೇಶಕ್ಕೆ ಬಳಸದೇ ಇದ್ದಲ್ಲಿ ದುರುಪಯೋಗಕ್ಕೆ ಕಾರಣವಾದ ಅಧಿಕಾರಿಗಳು ಮತ್ತು ಫಲಾನುಭವಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಅಗತ್ಯ ಕ್ರಮ ಕೈಗೊಳ್ಳುವುದು.

6. ಸರ್ಕಾರಿ ಆದೇಶ ಸಂಖ್ಯೆ: ಸಕಇ 195 ಎಸ್‌ಡಿಸಿ 2020, ಬೆಂಗಳೂರು, ದಿನಾಂಕ: 10-09-2020 ರಲ್ಲಿ ಇರುವಂತೆ ಇತರೆ ಅರ್ಹತೆ/ ಷರತ್ತುಗಳು ಅನ್ವಯಿಸುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 1 ಟಿಎಫ್‌ಪಿ 2022, ದಿನಾಂಕ:04-04-2022 ರಲ್ಲಿ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/6/2022

(ಪಿ.ಎನ್.ನಾಗರಾಜ್ )
ಸರ್ಕಾರದ ಉಪ ಕಾರ್ಯದರ್ಶಿ-3(ಪ್ರ),
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವಿಶೇಷ ಅಧಿಕಾರಿ, ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ/ಅತೀ ಸೂಕ್ಷ್ಮ ಸಮುದಾಯಗಳ ಕೋಶ.
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ, ವಿಕಾಸಸೌಧ.

******